# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002

ಸಂಖ್ಯೆ: BBMP/Addl.Dir/JD North/0151/2017-18 ದಿನಾಂಕ: 20-07-2019.

## ಪ್ರಾರಂಭಿಕ ಪ್ರಮಾಣಪತ್ರ

ವಿಷಯ: ಆಸ್ತಿ ಖಾತಾ ಸಂಖ್ಯೆ: 82/171/2, 172/3, ವಾರ್ಡ್ ನಂ. 05, ಸರ್ವೆ ನಂ. 171/2 ಮತ್ತು 171/3, ಕಟ್ಟಿಗೇನಹಳ್ಳಿ ಗ್ರಾಮ, ಬಾಗಲೂರು ರಸ್ತೆ, ಜಾಲಾ ಹೋಬಳಿ, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು, ಇಲ್ಲಿ ನಿರ್ಮಿಸುತ್ತಿರುವ ವಸತಿ ಸಮುಚ್ಚಯ ಮತ್ತು ಕ್ಲಬ್‌ಹೌಸ್ ಉಪಯೋಗದ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

ಉಲ್ಲೇಖ: 1) ಪ್ರಾರಂಭಿಕ ಪ್ರಮಾಣಪತ್ರ ಕೋರಲಾದ ತಮ್ಮ ಮನವಿ ಪತ್ರ ದಿನಾಂಕ: 16-05-2019.
2) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JD North/0151/2017-18, ದಿನಾಂಕ: 01-10-2018.

* * * * * * *

ಆಸ್ತಿ ಖಾತಾ ಸಂಖ್ಯೆ: 82/171/2, 172/3, ವಾರ್ಡ್ ನಂ. 05, ಸರ್ವೆ ನಂ. 171/2 ಮತ್ತು 171/3, ಕಟ್ಟಿಗೇನಹಳ್ಳಿ ಗ್ರಾಮ, ಬಾಗಲೂರು ರಸ್ತೆ, ಜಾಲಾ ಹೋಬಳಿ, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು, ಇಲ್ಲಿನ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ಎರಡು ಸಾಮಾನ್ಯ ತಳ ಮಹಡಿಗಳನ್ನೊಳಗೊಂಡಂತೆ ಟವರ್ – 1 ರಲ್ಲಿ ನೆಲ + ಮೇಲಿನ 13 ಅಂತಸ್ತುಗಳು ಹಾಗೂ ಟವರ್ – 2 & 3 ರಲ್ಲಿ ನೆಲ+ಮೇಲಿನ 14 ಅಂತಸ್ತುಗಳ ಒಟ್ಟಾರೆ 345 ಘಟಕಗಳುಳ್ಳ ವಸತಿ ಸಮುಚ್ಚಯ ಹಾಗೂ ನೆಲ+ಮೇಲಿನ 1 ಅಂತಸ್ತಿನ ಕ್ಲಬ್‌ಹೌಸ್ ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಉಲ್ಲೇಖ (2) ರಂತೆ ಈ ಕಛೇರಿಯಿಂದ ದಿನಾಂಕ: 01-10-2018 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಸದರಿ ವಸತಿ ಸಮುಚ್ಚಯ ಮತ್ತು ಕ್ಲಬ್‌ಹೌಸ್ ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (1) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಕಟ್ಟಡ ನಿರ್ಮಾಣದ ಸ್ಥಳವನ್ನು ದಿನಾಂಕ: 21-05-2019 ರಂದು ಪರಿಶೀಲಿಸಲಾಗಿದ್ದು, ಮಂಜೂರಾತಿ ನಕ್ಷೆಯಂತೆ ಅಗತ್ಯ ನಡುಜಾಗಗಳನ್ನು ಬಿಟ್ಟು ಕಟ್ಟಡದ ಕಾಮಗಾರಿಯು ಪ್ರಗತಿಯಲ್ಲಿರುವುದನ್ನು ಗಮನಿಸಲಾಗಿರುತ್ತದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 12-07-2019 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ಶುಲ್ಕ **ರೂ. 3,02,000/-** ಗಳಿಗೆ ಡಿ.ಡಿಯನ್ನು ಸಲ್ಲಿಸಿದ್ದು, ಈ ಕಛೇರಿಯ ರಶೀದಿ ಸಂಖ್ಯೆ: RE-ifms 331-TP/000197 ದಿನಾಂಕ: 20-07-2019 ರಲ್ಲಿ ಸಂಬಂಧಿಸಿದ ಲೆಕ್ಕ ಶೀರ್ಷಿಕೆಗೆ ಸಂದಾಯ ಮಾಡಿಕೊಳ್ಳಲಾಗಿದೆ. ಆದುದರಿಂದ ಉಲ್ಲೇಖ (2) ರಲ್ಲಿ ನಕ್ಷೆ ಮಂಜೂರಾತಿ ನೀಡಲಾದ ವಸತಿ ಸಮುಚ್ಚಯ ಮತ್ತು ಕ್ಲಬ್‌ಹೌಸ್ ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

**ಷರತ್ತುಗಳು**

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.

2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.

3. ಮಂಜೂರಾತಿಯ ಸಿಂಧುತ್ವವು ಉಲ್ಲೇಖ (1) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.

4. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.

5. ವಿವಿಧ ಇಲಾಖೆಗಳಿಂದ ನೀಡಿರುವ ನಿರಾಪೇಕ್ಷಣಾ ಪತ್ರಗಳಲ್ಲಿ ವಿಧಿಸಿರುವ ಷರತ್ತನ್ನು ಪಾಲಿಸತಕ್ಕದ್ದು.

ಸಹಿ /-
ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ,

M/s Salarpuria Real Estate Private Ltd.,
4th Floor, Salarpuria Windsor,
No. 3, Ulsoor road,
Bengaluru - 560042.

**ಪ್ರತಿಯನ್ನು:**

1. ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ವಿಭಾಗ) / ಸಹಾಯಕ ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ಉಪ-ವಿಭಾಗ) ರವರಿಗೆ ಮಾಹಿತಿಗಾಗಿ.
2. ಕಛೇರಿ ಪ್ರತಿ.

B.R. Muddaki 22/7/19

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

20/7/19 20/7/19 20/7/19